ನಿ-72 (203)

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ.ಯು.ಬಿ ವೆಂಕಟೇಶ್, ಶ್ರೀ ಹೆಚ್. ವಿಶ್ವನಾಥ, ಶ್ರೀ ಕೆ.ಸಿ ಕೊಂಡಯ್ಯ, ಶ್ರೀ ಕೆ.ಟಿ ಶ್ರೀಕಂಠೇಗೌಡ ಹಾಗೂ ಶ್ರೀ ಎಸ್.ವಿ ಸಂಕನೂರ ಇವರುಗಳು ನಿಯಮ-72ರಡಿಯಲ್ಲಿ ನೀಡಿರುವ ಸೂಚನಾಪತ್ರಕ್ಕೆ ಉತ್ತರ ಸಲ್ಲಿಸುವ ಬಗ್ಗೆ.**

**ವಿಷಯ:**

ಉತ್ತರ ಕರ್ನಾಟಕ ಭಾಗದ ಸರ್ವತೋಮುಖ ಬೆಳವಣಿಗೆ ದೃಷ್ಟಿಯಿಂದ ಹಾಗೂ ಆ ಭಾಗದ ಜ್ವಲಂತ ಸಮಸ್ಯೆಗಳನ್ನು ಚರ್ಚಿಸಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಬೆಳಗಾವಿಯಲ್ಲಿ ಸುವರ್ಣ ವಿಧಾನಸೌಧವನ್ನು ನಿರ್ಮಿಸಿ ಪ್ರತಿ ಚಳಿಗಾಲದ ಅಧಿವೇಶನವನ್ನು ನಡೆಸುತ್ತಾ ಬರಲಾಗುತ್ತಿದ್ದರೂ, ಕಳೆದ ವರ್ಷ ಕೋವಿಡ್ ಹಿನ್ನೆಲೆಯಲ್ಲಿ ಹಾಗೂ ಇನ್ನಿತರ ಕಾರಣಗಳಿಂದಾಗಿ ಸರ್ಕಾರ ಅಧಿವೇಶನವನ್ನು ನಡೆಸದೆ ಕುಂಟುನೆಪ ಹೇಳುತ್ತಾ ಬರುತ್ತಿದ್ದು, ಮುಂಬರುವ ಅಧಿವೇಶನವನ್ನು ಬೆಳಗಾವಿಯಲ್ಲೇ ನಡೆಸಬೇಕೆನ್ನುವ ವಿಷಯದ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

2020ನೇ ಸಾಲಿನಲ್ಲಿ ಕೋವಿಡ್-19 ಕಾರಣದಿಂದಾಗಿ ಚಳಿಗಾಲದ ಅಧಿವೇಶನವನ್ನು ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಸಿರುವುದಿಲ್ಲ. ಪ್ರಸ್ತುತ ಕೋವಿಡ್-19 ರ 2ನೇ ಅಲೆ ದೇಶಾದ್ಯಂತ ತೀವ್ರವಾಗಿದ್ದು, ಅದರಲ್ಲೂ ಮಹಾರಾಷ್ಟ್ರದಲ್ಲಿ ಹೆಚ್ಚಿನ ಪ್ರಕರಣಗಳು ಕಂಡು ಬಂದಿದೆ. ಬೆಳಗಾವಿಯು ಮಹಾರಾಷ್ಟ್ರ ರಾಜ್ಯಕ್ಕೆ ಅತೀ ಹತ್ತಿರವಾಗಿರುವುದರಿಂದ ಮಂತ್ರಿಗಳ, ಶಾಸಕರುಗಳ, ಅಧಿಕಾರಿಗಳ ಹಾಗೂ ಜನ ಸಾಮಾನ್ಯರ ಆರೋಗ್ಯದ ಹಿತವನ್ನು ದೃಷ್ಟಿಯಲ್ಲಿಟ್ಟುಕೊಂಡು ಚಳಿಗಾಲದ ಅಧಿವೇಶನದ ಸಮಯದಲ್ಲಿ ಇರುವ ಸ್ಥಿತಿಗತಿಯನ್ನು ಗಮನಿಸಿ ಸೂಕ್ತ ಸಮಯದಲ್ಲಿ ಸೂಕ್ತ ನಿರ್ಧಾರವನ್ನು ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.

ಕೋವಿಡ್-19 ಸಾಂಕ್ರಾಮಿಕ ಮಹಾಮಾರಿಯು ಕಡಿಮೆಯಾದಲ್ಲಿ ಅಥವಾ ನಿಯಂತ್ರಣಕ್ಕೆ ಬಂದಲ್ಲಿ, ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲದ ಅಧಿವೇಶನವನ್ನು ನಡೆಸಲು ಕ್ರಮ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುವುದು.

ಸಂವ್ಯಶಾಇ 05 ಸಂವ್ಯವಿ 2021

**(ಬಸವರಾಜ ಬೊಮ್ಮಾಯಿ)**
ಮಾನ್ಯ ಗೃಹ ಕಾನೂನು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ
ಸಚಿವರು.